All India Radio: Bangalore
National Bulletin In Kannada
03.03.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಪಶ್ಚಿಮ ಏಷ್ಯಾದಲ್ಲಿ ಯುದ್ಧದ ಸಂಘರ್ಷ ಮತ್ತಷ್ಟು ಉಲ್ಬಣ ; ಇರಾನ್ ಮಿಲಿಟರಿ ಮತ್ತು ಗುಪ್ತಚರ ನೆಲೆಗಳ ಮೇಲೆ ಇಸ್ರೇಲ್-ಅಮೆರಿಕ ಜಂಟಿ ಪಡೆಗಳಿಂದ ದಾಳಿ
2. ಸೌದಿ ಅರೇಬಿಯಾ, ಬಹ್ರೇನ್, ಜಾರ್ಡನ್ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದೂರವಾಣಿ ಸಂಭಾಷಣೆ
3. ಪಶ್ಚಿಮ-ಏಷ್ಯಾ ಯುದ್ಧ ಪರಿಸ್ಥಿತಿ ಹಿನ್ನೆಲೆ ; ಇಂದಿನ ೩೫೭ ವಿಮಾನ ಸಂಚಾರ ರದ್ದು
4. ಆರ್ಥಿಕ ಬೆಳವಣಿಗೆ ಕುರಿತ ಬಜೆಟ್ ನಂತರದ ವೆಬಿನಾರ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಭಾಷಣ
5. ಬರ್ಮಿಂಗ್‌ಹ್ಯಾಮ್‌ನಲ್ಲಿ ಆಲ್-ಇಂಗ್ಲೆಂಡ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಇಂದಿನಿಂದ ಆರಂಭ ; ಟೂರ್ನಿಗೆ ಭಾರತದ ಪಿ.ವಿ.ಸಿಂಧು ಅಲಭ್ಯ

<><><><>

ಪಶ್ಚಿಮ ಏಷ್ಯಾದಲ್ಲಿ ಯುದ್ಧದ ಭೀತಿ ಮತ್ತಷ್ಟು ಉಲ್ಬಣಗೊಂಡಿದ್ದು, ಇರಾನ್ ಮತ್ತು ಅಮೆರಿಕ-ಇಸ್ರೇಲ್ ಜಂಟಿ ಪಡೆಗಳ ನಡುವೆ ಕ್ಷಿಪಣಿ ಹಾಗೂ ಡ್ರೋನ್ ದಾಳಿಗಳು ತೀವ್ರಗೊಂಡಿವೆ. ಅಮೆರಿಕದ ಮತ್ತು ಇಸ್ರೇಲ್ ಪಡೆಗಳು ಇರಾನ್ ರಾಜಧಾನಿ ಟೆಹ್ರಾನ್‌ನ ಹಲವು ಸೇನಾ ಮತ್ತು ಗುಪ್ತಚರ ನೆಲೆಗಳ ಮೇಲೆ ಪ್ರಬಲ ದಾಳಿ ನಡೆಸಿದೆ. ಈ ಕುರಿತು ಶ್ವೇತ ಭವನದಲ್ಲಿ ಮಾತನಾಡಿರುವ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್, ಇರಾನ್‌ನ ಕ್ಷಿಪಣಿ ಸಾಮರ್ಥ್ಯವನ್ನು ನಾಶಪಡಿಸುವುದು, ಅವರ ನೌಕಾಪಡೆಯನ್ನು ಧ್ವಂಸಗೊಳಿಸುವುದು ಹಾಗೂ ಇರಾನ್ ಎಂದಿಗೂ ಪರಮಾಣು ಅಸ್ತ್ರವನ್ನು ಹೊಂದದಂತೆ ಮಾಡುವುದು ತಮ್ಮ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ. ಖಾಸಗಿ ಮಾಧ್ಯಮವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅಧ್ಯಕ್ಷ ಟ್ರಂಪ್, ಇರಾನ್ ವಿರುದ್ಧದ ಸಂಘರ್ಷದಲ್ಲಿ ಇನ್ನೂ ದೊಡ್ಡ ಅಲೆಯೊಂದು ಬರಬೇಕಿದೆ ಎಂದು ಎಚ್ಚರಿಸಿದ್ದಾರೆ. ಹಾಗೂ ಇರಾನ್‌ಗೆ ಅಮೆರಿಕ ಸೈನಿಕರನ್ನು ಕಳುಹಿಸುವ ಸಾಧ್ಯತೆಯ ಕುರಿತು ಮಾತನಾಡಿದ್ದಾರೆ. ಅಮೆರಿಕ

ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರುಬಿಯೋ ಕೂಡ ಮಾತನಾಡಿದ್ದು, ಮುಂದಿನ ಹಂತದ ದಾಳಿಗಳು ಇರಾನ್ ಮೇಲೆ ಮತ್ತಷ್ಟು ಕಠಿಣವಾಗಿರಲಿದ್ದು, ಈ ಕಾರ್ಯಾಚರಣೆ ನಂತರ ಜಗತ್ತು ಸುರಕ್ಷಿತವಾಗಲಿದೆ ಎಂದಿದ್ದಾರೆ. ಅಮೆರಿಕ ವರದಿಯ ಪ್ರಕಾರ ಕೇವಲ ೪೮ ಗಂಟೆಗಳಲ್ಲಿ ಇರಾನ್‌ನ ೧ ಸಾವಿರದ ೨೫೦ಕ್ಕೂ ಅಧಿಕ ಗುರಿಗಳ ಮೇಲೆ ದಾಳಿ ಮಾಡಲಾಗಿದೆ. ಇತ್ತ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು ಇರಾನ್ ಕ್ಷಿಪಣಿ ದಾಳಿಗೆ ತುತ್ತಾದ ಬೇಟ್ ಶೇಮೆಶ್ ನಗರಕ್ಕೆ ಭೇಟಿ ನೀಡಿ, ನಾಗರಿಕರಿಗೆ ಸಾಂತ್ವನ ತಿಳಿಸಿದರು. ಈ ನಡುವೆ ಇರಾನ್‌ನ ಐಆರ್‌ಜಿಸಿ ಪಡೆ ಹೇಳಿಕೆ ನೀಡಿದ್ದು, ಸರ್ವೋಚ್ಚ ನಾಯಕ ಹಾಗೂ ಇತರ ಅಧಿಕಾರಿಗಳ ಸಾವಿನಿಂದ ಇರಾನ್ ಎದೆ ಗುಂದಿಲ್ಲ ಎಂದು ತಿಳಿಸಿದೆ. ಇರಾನ್ ಅಧ್ಯಕ್ಷ ಮಸೂದ್ ಪೆಜೆಷ್ಕಿಯಾನ್ ಅವರು, ಇಸ್ರೇಲ್ ದಾಳಿಯಲ್ಲಿ ರಕ್ಷಣಾ ಸಚಿವರು ಹತ್ಯೆಯಾದ ಹಿನ್ನೆಲೆಯಲ್ಲಿ ಜನರಲ್ ಮಜೀದ್ ಹೆಬ್ನೆಲ್ ರೆಜಾ ಅವರನ್ನು ನೂತನ ರಕ್ಷಣಾ ಸಚಿವರನ್ನಾಗಿ ನೇಮಿಸಿದ್ದಾರೆ.

<><><><>

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಉಲ್ಬಣಗೊಳ್ಳುತ್ತಿರುವ ನಡುವೆ ಇರಾನ್‌ನ ೩೧ ಪ್ರಾಂತ್ಯಗಳ ಪೈಕಿ ೨೪ ಪ್ರಾಂತ್ಯಗಳಲ್ಲಿ ಸುಮಾರು ೧ ಸಾವಿರದ ೨೦೦ಕ್ಕೂ ಅಧಿಕ ಸ್ಫೋಟಕಗಳನ್ನು ಕ್ಷಿಪಣಿ ಹಾಗೂ ಬಾಂಬ್‌ದಾಳಿ ನಡೆಸಲಾಗಿದೆ ಎಂದು ಇಸ್ರೇಲ್ ಘೋಷಿಸಿದೆ. ಈ ದಾಳಿಗೆ ಪ್ರತಿಯಾಗಿ ಇರಾನ್ ಕೂಡ ಬಹ್ರೇನ್, ಇರಾಕ್, ಜಾರ್ಡನ್, ಕುವೈತ್ ಸೇರಿದಂತೆ ೯ ರಾಷ್ಟ್ರಗಳ ಮೇಲೆ ಕ್ಷಿಪಣಿ ದಾಳಿಗಳನ್ನು ನಡೆಸುವ ಮೂಲಕ ಸಂಘರ್ಷವನ್ನು ವಿಸ್ತರಿಸಿದೆ. ರೆಡ್ ಕ್ರೆಸೆಂಟ್ ಸಂಸ್ಥೆಯ ವರದಿ ಪ್ರಕಾರ ಇಸ್ರೇಲ್-ಅಮೆರಿಕದ ಈ ಜಂಟಿ ದಾಳಿಯಲ್ಲಿ ಇರಾನ್‌ನಲ್ಲಿ ಇದುವರೆಗೆ ೫೫೫ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ಇರಾನ್‌ನ ಮಿನಾಬ್‌ನಲ್ಲಿರುವ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯ ಮೇಲೆ ನಡೆದ ದಾಳಿಯಲ್ಲಿ ಸುಮಾರು ೧೮೦ ಶಾಲಾ ಮಕ್ಕಳು ಮೃತಪಟ್ಟಿದ್ದಾರೆ. ಇತ್ತೀಚೆಗೆ ಮೃತಪಟ್ಟ ಇರಾನ್ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೈನಿ ಅವರ ಪತ್ನಿ ಕೂಡ ದಾಳಿಯಲ್ಲಿ ಮೃತಪಟ್ಟಿರುವುದಾಗಿ ಇರಾನ್ ಸರ್ಕಾರಿ ಸ್ವಾಮ್ಯದ ಮಾಧ್ಯಮಗಳು ವರದಿ ಮಾಡಿವೆ. ಈ ಯುದ್ಧದ ಬಿಸಿ ನೆರೆಹೊರೆ ರಾಷ್ಟ್ರಗಳ ಮೇಲೂ ತಟ್ಟಿದ್ದು, ಕುವೈತ್‌ನಲ್ಲಿ ನಡೆದ ಇರಾನ್ ದಾಳಿಯಲ್ಲಿ ನಾಲ್ವರು ಅಮೆರಿಕ ಸೈನಿಕರು ಮೃತಪಟ್ಟಿದ್ದಾರೆ. ಕುವೈತ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ನಡೆದ ಡ್ರೋನ್ ದಾಳಿಯಲ್ಲಿ ಒಬ್ಬರು ಮೃತಪಟ್ಟು ೩೨ ಮಂದಿ

ಗಾಯಗೊಂಡಿದ್ದಾರೆ. ಈ ನಡುವೆ ಲೆಬನಾನ್‌ನಲ್ಲಿ ಹೆಜ್ಬುಲ್ಲಾ ಸಂಘಟನೆಯೂ ಇಸ್ರೇಲ್ ಮೇಲೆ ನಡೆಸಿದ ಕ್ಷಿಪಣಿ ದಾಳಿಗೆ ಪ್ರತಿಯಾಗಿ ಇಸ್ರೇಲ್ ನಡೆಸಿದ ಪ್ರತಿ ದಾಳಿಯಲ್ಲಿ ಕನಿಷ್ಠ ೫೨ ಮಂದಿ ಮೃತಪಟ್ಟಿದ್ದಾರೆ. ಈ ಹಿನ್ನೆಲೆ ಲೆಬನಾನ್ ಸರ್ಕಾರ ಹೆಜ್ಬುಲ್ಲಾ ಸಂಘಟನೆಯ ಎಲ್ಲಾ ಮಿಲಿಟರಿ ಚಟುವಟಿಕೆಗಳನ್ನು ನಿಷೇಧಿಸಿದೆ. ಇಸ್ರೇಲ್ ನಡೆಸಿದ ನಿಖರ ದಾಳಿಯಲ್ಲಿ ಹೆಜ್ಬುಲ್ಲಾ ಗುಪ್ತಚರ ವಿಭಾಗದ ಮುಖ್ಯಸ್ಥ ಹುಸೇನ್ ಮಕ್ಲೇದ್ ಹಾಗೂ ಪ್ಯಾಲಿಸ್ತೇನ್ ಇಸ್ಲಾಮಿಕ್ ಜಿಹಾದ್‌ನ ಮಿಲಿಟರಿ ಕಮಾಂಡರ್ ಹತ್ಯೆಯಾಗಿದ್ದಾರೆ ಎಂದು ಇಸ್ರೇಲ್ ಸೇನೆ ತಿಳಿಸಿದೆ. ಪ್ರಸ್ತುತ ಪಶ್ಚಿಮ ಏಷ್ಯಾದ್ಯಂತ ಉದ್ವಿಘ್ನ ಪರಿಸ್ಥಿತಿ ಮುಂದುವರಿದಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಸೌಧಿ ಅರೇಬಿಯಾ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರೊಂದಿಗೆ ಪಶ್ಚಿಮ ಏಷ್ಯಾದಲ್ಲಿ ಉಲ್ಬಣಗೊಳ್ಳುತ್ತಿರುವ ಪರಿಸ್ಥಿತಿಯ ಕುರಿತು ದೂರವಾಣಿ ಸಂಭಾಷಣೆ ನಡೆಸಿ ಚರ್ಚಿಸಿದರು. ಸೌಧಿ ಅರೇಬಿಯಾ ಮೇಲೆ ಇತ್ತೀಚೆಗೆ ನಡೆದ ದಾಳಿಗಳನ್ನು ತೀವ್ರವಾಗಿ ಖಂಡಿಸಿದ ಪ್ರಧಾನಿ, ಇವು ಆ ದೇಶದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಉಲ್ಲಂಘನೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಈ ಸಂಕಷ್ಟದ ಸಮಯದಲ್ಲಿ ಭಾರತೀಯ ಸಮುದಾಯದ ಯೋಗ ಕ್ಷೇಮವನ್ನು ಕಾಪಾಡುತ್ತಿರುವ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರಿಗೆ ಪ್ರಧಾನಿ ಕೃತಜ್ಞತೆ ಸಲ್ಲಿಸಿದರು. ಇದರ ಜೊತೆಗೆ ಪ್ರಧಾನಿ, ಬಹರೇನ್ ದೊರೆ ಹಮದ್ ಬಿನ್ ಇಸಾ ಅಲ್ ಖಲೀಫಾ ಹಾಗೂ ಜಾರ್ಡನ್ ದೊರೆ ಅಬ್ದುಲ್ಲಾ-೨ ಅವರೊಂದಿಗೂ ಉಲ್ಬಣಗೊಳ್ಳುತ್ತಿರುವ ಪರಿಸ್ಥಿತಿಯ ಕುರಿತು ಚರ್ಚೆ ನಡೆಸಿ, ಭಾರತೀಯ ಸಮುದಾಯದ ಯೋಗ ಕ್ಷೇಮವನ್ನು ಕಾಪಾಡುತ್ತಿರುವ ಬಗ್ಗೆ ಕೃತಜ್ಞತೆ ವ್ಯಕ್ತಪಡಿಸಿದರು.

<><><>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘಷದ ಹಿನ್ನೆಲೆ ಕಾರ್ಯಾಚರಣೆಗೆ ಯೋಜಿಸಲಾದ ೩೫೮ ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಯಾಣಿಕರಿಗೆ ಅನುಕೂಲ ಒದಗಿಸಲು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ತಿಳಿಸಿರುವ ಸಚಿವಾಲಯ, ಪ್ರಯಾಣಿಕರ ಕುಂದುಕೊರತೆಗಳನ್ನು, ಪ್ರಯಾಣಿಕರ ಸಹಾಯ ನಿಯಂತ್ರಣ ಕೊಠಡಿಯ ಮೂಲಕ ಮೇಲ್ವಿಚಾರಣೆ ಮಾಡಲಾಗುತ್ತಿದೆ, ಆದ್ಯತೆಯ ಮೇಲೆ ತ್ವರಿತ ಪರಿಹಾರವನ್ನು ಒದಗಿಸಲಾಗುತ್ತದೆ ಎಂದು

ತಿಳಿಸಿದೆ. ಏರ್‌ಸೇವಾ, ಸಾಮಾಜಿಕ ಮಾಧ್ಯಮ ವೇದಿಕೆಗಳು ಮತ್ತು ಮೀಸಲಾದ ಸಹಾಯವಾಣಿ ಕರೆಗಳ ಮೂಲಕ, ವಿಮಾನಯಾನ ಸಂಸ್ಥೆಗಳು ಮತ್ತು ಸಂಬಂಧಪಟ್ಟ ಪಾಲುದಾರರ ಸಮನ್ವಯದೊಂದಿಗೆ ಈ ಅವಧಿಯಲ್ಲಿ ಒಟ್ಟು ೫೫೯ ಕುಂದುಕೊರತೆಗಳನ್ನು ಪರಿಹರಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ರದ್ದತಿ ಮತ್ತು ಮರುಹೊಂದಿಸುವಿಕೆಯ ಕುರಿತು ನಿಖರವಾದ ಬೆಳವಣಿಗೆಗಳ ಮಾಹಿತಿಗಾಗಿ ಅಧಿಕೃತ ವಿಮಾನಯಾನ ಮೂಲಗಳನ್ನು ಪರಿಶೀಲಿಸುವಂತೆ ಪ್ರಯಾಣಿಕರಿಗೆ ಸೂಚಿಸಲಾಗಿದೆ. ಹೆಚ್ಚಿನ ಸಹಾಯಕ್ಕಾಗಿ, ಪ್ರಯಾಣಿಕರು ಸಚಿವಾಲಯದ ಪಿಎಸಿಆರ್ ಸಹಾಯವಾಣಿ ಸಂಖ್ಯೆಗಳನ್ನು ೦೧೧-೨೪೬೦೪೨೮೩ ಅಥವಾ ೦೧೧-೨೪೬೩೨೯೮೭ ಅನ್ನು ಸಂಪರ್ಕಿಸಬಹುದು ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಇಂದು "ಆರ್ಥಿಕ ಬೆಳವಣಿಗೆಯನ್ನು ಸುಸ್ಥಿರಗೊಳಿಸುವುದು ಮತ್ತು ಬಲಪಡಿಸುವುದು" ಎಂಬ ವಿಷಯದ ಕುರಿತು ವೀಡಿಯೊ ಕಾನ್ಫರೆನ್ಸ್ ಮೂಲಕ ಬಜೆಟ್ ನಂತರದ ವೆಬಿನಾರ್ ಅನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕೈಗಾರಿಕಾ ಪ್ರಮಾಣವನ್ನು ವಿಸ್ತರಿಸಲು, ತಾಂತ್ರಿಕ ನಾಯಕತ್ವ ಮತ್ತು ನಿರ್ಣಾಯಕ ವಲಯಗಳ ಅಡಿಪಾಯವನ್ನು ಬಲಪಡಿಸಲು ಭವಿಷ್ಯದ ಸುಧಾರಣಾ ಕ್ರಮಗಳ ಬಗ್ಗೆ ಬಜೆಟ್ ನಂತರದ ವೆಬಿನಾರ್ ಗಮನ ಹರಿಸಲಿದೆ ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ. ಈ ಆದ್ಯತೆಗಳನ್ನು ಪರಿಣಾಮಕಾರಿ ಕಾರ್ಯವಾಗಿ ಪರಿವರ್ತಿಸುವತ್ತ ಚರ್ಚೆಗಳು ಗಮನಹರಿಸಲಿವೆ.

<><><><>

ಅಗತ್ಯವಿರುವ ಮತ್ತು ಚಾಲ್ತಿಯಲ್ಲಿರುವ ವಾಯುಪ್ರದೇಶದ ಪರಿಸ್ಥಿತಿಗೆ ಅನುಗುಣವಾಗಿ ಸಿಲುಕಿರುವ ಪ್ರಯಾಣಿಕರ ಅನುಕೂಲಕ್ಕೆ ಇಂಡಿಗೋ ಇಂದು ಜೆಡ್ಡಾದಿಂದ ಭಾರತಕ್ಕೆ ೧೦ ವಿಶೇಷ ಪರಿಹಾರ ಕಾರ್ಯಾಚರಣೆಗಳನ್ನು ಯೋಜಿಸಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ. ಪ್ರಯಾಣಿಕರ ಅನುಕೂಲಕ್ಕಾಗಿ ಇಂಡಿಗೋ ಜೆಡ್ಡಾದಲ್ಲಿರುವ ಭಾರತೀಯ ಕಾನ್ಸುಲೇಟ್ ಜನರಲ್‌ನೊಂದಿಗೆ ಸಮನ್ವಯ ಸಾಧಿಸುತ್ತಿದೆ. ನಾಗರಿಕ ವಿಮಾನಯಾನ ಕಾರ್ಯದರ್ಶಿ ಸಮೀರ್ ಕುಮಾರ್ ಸಿನ್ಹಾ ಮತ್ತು ಎಲ್ಲಾ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದ ಉನ್ನತ ಮಟ್ಟದ ಸಭೆಯನ್ನು ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಪರಿಶೀಲಿಸಿದರು. ಮಧ್ಯಪ್ರಾಚ್ಯದ

ಕೆಲವು ಭಾಗಗಳಲ್ಲಿ ಉಲ್ಬಣಗೊಳ್ಳುತ್ತಿರುವ ವಾಯುಪ್ರದೇಶದ ಪರಿಸ್ಥಿತಿ ಮತ್ತು ಅಂತರರಾಷ್ಟ್ರೀಯ ವಿಮಾನ ಕಾರ್ಯಾಚರಣೆಗಳ ಮೇಲೆ ಅದರ ಪರಿಣಾಮವನ್ನು ಸಚಿವಾಲಯ ಸೂಕ್ಷ್ಮವಾಗಿ ಗಮನಿಸುತ್ತಿದೆ ಹಾಗೂ ಅಗತ್ಯವಿರುವಲ್ಲಿ ವಿಮಾನಯಾನ ಸಂಸ್ಥೆಗಳು ಹೆಚ್ಚುವರಿ ವ್ಯವಸ್ಥೆಗಳನ್ನು ಮಾಡುತ್ತವೆ ಎಂದು ಸಚಿವಾಲಯ ತಿಳಿಸಿದೆ.

<><><>

ಬರ್ಮಿಂಗ್ ಹ್ಯಾಮ್‌ನಲ್ಲಿ ಇಂದಿನಿಂದ ನಡೆಯಲಿರುವ ಅಲ್ ಇಂಗ್ಲೆಂಡ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ತನ್ನ ೧೨ ಸದಸ್ಯರ ತಂಡದೊಂದಿಗೆ ಅಭಿಯಾನ ಆರಂಭಿಸಲಿದೆ. ೫ ವಿಭಾಗಗಳಲ್ಲಿ ಭಾರತೀಯ ಆಟಗಾರರು ಕಣಕ್ಕಿಳಿಯಲಿದ್ದಾರೆ. ಪಶ್ಚಿಮ-ಏಷ್ಯಾ ಸಂಘರ್ಷದಿಂದ ವಾಯುಪ್ರದೇಶ ಮುಚ್ಚಲ್ಪಟ್ಟ ಕಾರಣ ದುಬೈನಲ್ಲಿ ಸಿಲುಕಿಕೊಂಡಿರುವ ತಾರಾ ಆಟಗಾರ್ತಿ ಪಿ.ವಿ. ಸಿಂಧು ಅವರು, ಟೂರ್ನಿಗೆ ಅಲಭ್ಯರಾಗಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಲಕ್ಷ್ಯಸೇನ್, ಮಹಿಳಾ ಸಿಂಗಲ್ಸ್‌ನಲ್ಲಿ ಮಾಳವಿಕಾ ಬನ್ಸೋಡ್ ಉನ್ನತಿ ಹೂಡಾ ಕಣಕ್ಕಿಳಿಯುತ್ತಿದ್ದಾರೆ. ಮಹಿಳಾ ಡಬಲ್ಸ್‌ನಲ್ಲಿ ತ್ರಿಶಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಮಿಶ್ರ ಡಬಲ್ಸ್‌ನಲ್ಲಿ ಧ್ರುವ್‌ಕಪಿಲಾ ಮತ್ತು ತನಿಶಾ ಕ್ರಾಸ್ಟೊ ಜೋಡಿ ಕಣಕ್ಕಿಳಿಯುತ್ತಿದೆ. ಪುರುಷರ ಡಬಲ್ಸ್‌ನಲ್ಲಿ ಮಾಜಿ ವಿಶ್ವ ನಂ.೧ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ನಾಳೆ ತನ್ನ ಅಭಿಯಾನ ಆರಂಭಿಸಲಿದೆ.

<><><>

ಕರ್ನಾಟಕದ ಕಲಬುರಗಿಯಲ್ಲಿ ಆಯೋಜಿಸಲಾಗಿರುವ ಐಟಿಎಫ್ ಡಬ್ಲ್ಯೂ-೩೫ ಅಂತಾರಾಷ್ಟ್ರೀಯ ಮಹಿಳಾ ಟೆನಿಸ್ ಟೂರ್ನಿಯಲ್ಲಿ ನಿನ್ನೆ ನಡೆದ ಅರ್ಹತಾ ಸುತ್ತಿನ ಪಂದ್ಯಗಳಲ್ಲಿ ಐವರು ಭಾರತೀಯ ಆಟಗಾರ್ತಿಯರು ಜಯ ಸಾಧಿಸಿ ಪ್ರಧಾನ ಸುತ್ತಿಗೆ ಲಗ್ಗೆ ಇಟ್ಟಿದ್ದಾರೆ. ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭನ್ವರ್ ಸಿಂಗ್ ಮೀನಾ ಹಾಗೂ ಮಹಾನಗರ ಪಾಲಿಕೆ ಆಯುಕ್ತ ಶಿಂಧೆ ಅವಿನಾಶ್ ಸಂಜೀವನ್ ಅವರ ಉಪಸ್ಥಿತಿಯಲ್ಲಿ ಟೂರ್ನಿಯ ಅಧಿಕೃತ ಡ್ರಾ ಪ್ರಕಟಿಸಲಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>